ಸಾಕ್ಷಿ ಯನ್ನು ದಿಃ 26.03.2026 ರಂದು  ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ  ವಾದಿ ಪರ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ವಿಷಯಗಳು ಸತ್ಯವಾಗಿದ್ದು, ಅವುಗಳನ್ನು ನಾನೇ ನನ್ನ ವಕೀಲರಿಗೆ ಹೇಳಿ ಬರೆಸಿ, ಅದರಲ್ಲಿರುವ ವಿಷಯಗಳನ್ನು ತಿಳಿದುಕೊಂಡು ಸಹಿ ಮಾಡಿದ್ದೇನೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

1. ಸಾಕ್ಷಿ ನಿಪಿ - 1 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು **ನಿಪಿ - 1(ಬಿ)** ಎಂದು ಗುರುತಿಸಲಾಯಿತು.
2. ಸಾಕ್ಷಿಯು ನಿಪಿ-1 ರಲ್ಲಿರುವ ವಾದಿ ಹಾಗೂ ಪ್ರತಿವಾದಿಯ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ವಾದಿಯ ಸಹಿಯನ್ನು ಈಗಾಗಲೇ ನಿಪಿ-1(ಎ) ಎಂದು ಗುರುತಿಸಲಾಗಿದೆ. ಪ್ರತಿವಾದಿಯ ಸಹಿಯನ್ನು **ನಿಪಿ - 1(ಸಿ)** ಎಂದು ಗುರುತಿಸಲಾಯಿತು.
3. ನಿಪಿ - 1 ಕ್ಕೆ ಸಾಕ್ಷಿಗಳಾಗಿ ಮಹೇಶ ಹಾಗೂ ಪಿ.ಎನ್.ಕಸ್ತೂರಿ ಎಂಬುವವರು ನನ್ನ ಸಮಕ್ಷಮ ಸಹಿ ಮಾಡಿರುತ್ತಾರೆ.

**ಪಾಟೀ ಸವಾಲುಃ ಪ್ರತಿವಾದಿಯರ ಪರ ವಕೀಲರು ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದಂತೆ ನನ್ನ ಉಕ್ತಲೇಖದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಪಿರಿಯಾಪಟ್ಟಣ